ಓ ಎಸ್ ನಂಃ 388-16
ಪಿ ಡಬ್ಲ್ಯೂ ಃ 1

**ದಿಃ 15-09-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದ

**20. ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರಿಕೆ ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಚಾರಗಳು ಸತ್ಯವಾಗಿರುತ್ತದೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಸದರಿ ಪ್ರಮಾಣ ಪತ್ರಿಕೆಯನ್ನು ನನ್ನ ಮುಖ್ಯ ವಿಚಾರಣೆ ಎಂದು ತೆಗೆದುಕೊಳ್ಳಬೇಕು ಎಂದು ಕೋರುತ್ತೇನೆ.**

21. ನಾನು 8 ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ 1 ರಿಂದ 8 ಎಂದು ಗುರುತಿಸಲಾಯಿತು. ನಾನು 3 ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ 9 ರಿಂದ 11 ಎಂದು ಗುರುತಿಸಲಾಯಿತು. ನಾನು ಮ್ಯುಟೇಷನ್ ದಾಖಲೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 12 ಎಂದು ಗುರುತಿಸಲಾಯಿತು. ನಾನು ದಿನಾಂಕಃ 24-04-2015 ರ ನೊಂದಾಯಿತ ದಾನಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಇದರ ಮೂಲ ಪ್ರತಿ ಪ್ರತಿವಾದಿಗಳ ಕಡೆ ಇದೆ ಎಂದು ಹೇಳಿದ್ದರಿಂದ ಅದನ್ನು ನಿಪಿ 13 ಎಂದು ಗುರುತಿಸಲಾಯಿತು. ನಾನು ಓ ಎಸ್ ನಂ 1426/84 ರ ಆದೇಶದ ಪುಟದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 14 ಎಂದು ಗುರುತಿಸಲಾಯಿತು. ನಾನು ಓ ಎಸ್ ನಂ 1426/84 ರ ತೀರ್ಪಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 15 ಎಂದು ಗುರುತಿಸಲಾಯಿತು. ನಾನು ಓ ಎಸ್ ನಂ 1426/84 ರ ಪ್ರತಿವಾದ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 16 ಎಂದು ಗುರುತಿಸಲಾಯಿತು. ನಾನು ಓ ಎಸ್ ನಂ 1426/84 ರ 1 ಮತ್ತು 2 ನೇ ಪ್ರತಿವಾದಿಗಳ ಪ್ರತಿವಾದ ಪತ್ರಗಳ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 17 ಎಂದು ಗುರುತಿಸಲಾಯಿತು. ನಾನು ಓ ಎಸ್ ನಂ 1426/84 ರ 2 ಡಿಕ್ರಿಗಳ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ 18 ಮತ್ತು 19 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ ಮುಂದುವರೆಸಲು ಕಾಲವಕಾಶ ಕೋರಿದ್ದಾರೆ ನೀಡಲಾಗಿದೆ.

**(ಉಕ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಎ ಓ**

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
**ಮಾಗಡಿ.**